ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ಮಕ್ಕಳಿಗೆ ಲಿಂಗಸಂವೇದನೆ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

1007 (1218) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ಮಕ್ಕಳಿಗೆ ಲಿಂಗಸಂವೇದನೆ Gender Sensitization) ಬಗ್ಗೆ ತಿಳುವಳಿಕೆ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ರಾಜ್ಯದಲ್ಲಿರುವ ಶಾಲೆಗಳಲ್ಲಿ 6ನೇ ತರಗತಿಯಿಂದ 12ನೇ ತರಗತಿಯವರೆಗೆ ಕಲಿಯುತ್ತಿರುವ ಹೆಣ್ಣು ಮಕ್ಕಳಿಗೆ ಮುಟ್ಟಿನ ನೈರ್ಮಲ್ಯದ (Menstrual Hygiene) ಬಗ್ಗೆ ಮತ್ತು ಸ್ವಯಂ ಸ್ವಚ್ಛತೆ ಕಾಪಾಡಿಕೊಳ್ಳುವ ಬಗ್ಗೆ ಅರಿವು ಮೂಡಿಸಿ ಶಾಲಾ ವಿದ್ಯಾಭ್ಯಾಸದಲ್ಲಿ ಗಣನೀಯವಾಗಿ ಇಳಿಮುಖವಾಗುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆಯನ್ನು ತಡೆಯಲಾಗುವುದೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ?